# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ಗೊಟ್ಟಿಗೆರೆ ವಾರ್ಡ್ ಸಂಖ್ಯೆ–194.

## ವಾರ್ಡ್ ಕಛೇರಿಯಲ್ಲಿ ದಿನಾಂಕ: 19-03-2022 ರಂದು ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು.

| ಹಾಜರಿದ್ದವರು |
| --- |
| ೧. ಅಧ್ಯಕ್ಷರು, ಗೊಟ್ಟಿಗೆರೆ, ವಾರ್ಡ್ ಸಮಿತಿ, ಬೊಮ್ಮನಹಳ್ಳಿ, ಬೆಂಗಳೂರು.<br>೨. ಹಿರಿಯ ಆರೋಗ್ಯ ಪರಿವೀಕ್ಷಕರು ಹಾಗೂ ಕಾರ್ಯದರ್ಶಿ, ವಾರ್ಡ್ ನಂ.೧೯೪, ಗೊಟ್ಟಿಗೆರೆ.<br>೩. ಸಹಾಯಕ ಕಾರ್ಯಪಾಲಕ ಅಭಿಯಂತರರು (ಬಿ.ಡಬ್ಲ್ಯೂ.ಎಸ್.ಎಸ್.ಬಿ)<br>೪. ಸಹಾಯಕ ಕಾರ್ಯಪಾಲಕ ಅಭಿಯಂತರರು (ಬೆಸ್ಕಾಂ), ಗೊಟ್ಟಿಗೆರೆ.<br>೫. ಆರೋಗ್ಯಾಧಿಕಾರಿಗಳು, ಗೊಟ್ಟಿಗೆರೆ.<br>೬. ಕಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್ ೧೯೪, ಗೊಟ್ಟಿಗೆರೆ.<br>೭. ಅರಣ್ಯ ಸಂರಕ್ಷಣಾಧಿಕಾರಿ, ಗೊಟ್ಟಿಗೆರೆ.<br>೮. ತೋಟಗಾರಿಕೆ ಸಹಾಯಕರು, ಗೊಟ್ಟಿಗೆರೆ.<br>೯. ವಾರ್ಡ್ ಸಹಾಯಕ ಅಭಿಯಂತರರು ವಾರ್ಡ್ ನಂ.೧೯೪, ಗೊಟ್ಟಿಗೆರೆ.<br>ಸ್ಥಳೀಯ ಸಂಘ ಸದಸ್ಯರು:–<br>೧. ಅಧ್ಯಕ್ಷರು, ರಾಯಲ್‌ಕೌಂಟಿ, ರೆಸಿಡೆನ್ಸಿಯಲ್ ವೆಲ್‌ಫೇರ್ ಅಸೋಸಿಯೇಷನ್, ಗೊಟ್ಟಿಗೆರೆ.<br>೨. ಅಧ್ಯಕ್ಷರು, ಕ್ಲಾಸಿಕ್ ಆರ್ಚರ್ಡ್ಸ್.<br>೩. ಅಧ್ಯಕ್ಷರು, ಹಿಮಗಿರಿ ಮೆಡೋಸ್, ರೆಸಿಡೆನ್ಸಿಯಲ್ ವೆಲ್‌ಫೇರ್ ಅಸೋಸಿಯೇಷನ್, ಗೊಟ್ಟಿಗೆರೆ.<br>೪. ಅಧ್ಯಕ್ಷರು, ಪರಿವರ್ತನ ಸಂಘ, ರೆಸಿಡೆನ್ಸಿಯಲ್ ವೆಲ್‌ಫೇರ್ ಅಸೋಸಿಯೇಷನ್, ಗೊಟ್ಟಿಗೆರೆ |

ದಿನಾಂಕ: 19-03-2022ರಂದು ಮಧ್ಯಾಹ್ನ 03:30 ಘಂಟೆಗೆ ನಡೆಸಲಾದ ವಾರ್ಡ್ ಸಮಿತಿ ಸಭೆಯಲ್ಲಿ ಅಧ್ಯಕ್ಷರು ಸಭೆಯಲ್ಲಿ ಎಲ್ಲರನ್ನು ಸ್ವಾಗತಿಸುತ್ತಾ, ಈ ಕೆಳಕಂಡ ವಿಷಯಗಳ ಬಗ್ಗೆ ಚರ್ಚಿಸಿಲಾಯಿತು.

1. **ಕೋವಿಡ್–19 ಸಂಬಂಧ ಸೋಂಕು ಹರಡುವುದನ್ನು ತಡೆಗಟ್ಟುವ ಸಂಬಂಧ ತೆಗೆದುಕೊಳ್ಳಬೇಕಾದ ಮುಂಜಾಗ್ರತ ಬಗ್ಗೆ.**

(I) ಕೋವಿಡ್ ಪ್ರಕರಣಗಳು ಕಡಿಮೆಯಾಗಿದ್ದು ಪ್ರಸ್ತುತ micro containment zone ಗಳಿರುವುದಿಲ್ಲ ಎಂದು ಆರೋಗ್ಯಾಧಿಕಾರಿಗಳು ತಿಳಿಸುತ್ತಾ ಕೋವಿಡ್ ಸೂಕ್ತ ನಡವಳಿಕೆಯನ್ನು ಅನುಸರಿಸುವುದನ್ನು ಮುಂದುವರಿಸಲು ನಾಗರಿಕರಲ್ಲಿ ಕೋರಲಾಯಿತು.

(II) ಲಸಿಕಾ ಕಾರ್ಯಕ್ರಮವನ್ನು ೧೨ ರಿಂದ ೧೪ ವರ್ಷ ವಯಸ್ಸಿನ ಮಕ್ಕಳಿಗೂ ಜಾರಿಗೊಳಿಸಲಾಗಿದ್ದು ಗೊಟ್ಟಿಗೆರೆ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಪಡೆಯಲು ಸೂಚಿಸಲಾಯಿತು.

2. **ಘನತ್ಯಾಜ್ಯ ನಿರ್ವಹಣೆಯ ಬಗ್ಗೆ.**

(I) ಹಿಮಗಿರಿ ಮೆಡೋಸ್ ಹಾಗೂ ಸೌತ್ ಅವೆನ್ಯು ಬಡಾವಣೆಗಳಿಗೆ ಆಟೋ ಟಿಪ್ಪರ್ ಪ್ರತಿನಿತ್ಯ ಬರದೆಯಿರುವ ಬಗ್ಗೆ ಅಗತ್ಯ ಕ್ರಮ ವಹಿಸಲು ಕಿರಿಯ ಆರೋಗ್ಯ ಪರಿವೀಕ್ಷಕರಿಗೆ ಸೂಚಿಸಲಾಯಿತು.

(II) ಹಿಮಗಿರಿ ಮೆಡೋಸ್ ಬಡಾವಣೆಗೆ ಬರುವ ದಾರಿಯಲ್ಲಿ ತ್ಯಾಜ್ಯವಿದ್ದು ಕೂಡಲೇ ತೆರವುಗೊಳಿಸಲು ಕಿರಿಯ ಆರೋಗ್ಯ ಪರಿವೀಕ್ಷಕರಿಗೆ ಸೂಚಿಸಲಾಯಿತು.

Scanned by CamScanner

(III) ಹರಿನಗರ – ಸಾರತಿ ನಗರ ರಸ್ತೆಯಲ್ಲಿ ತ್ಯಾಜ್ಯ ಹಾಕುತ್ತಿದ್ದು ಈ ಸಂಬಂಧ ಪರಿಶೀಲಿಸಿ ಕ್ರಮವಹಿಸಲು ಆರೋಗ್ಯ ಪರಿವೀಕ್ಷಕರಿಗೆ ಸೂಚಿಸಲಾಯಿತು.

(IV) ಕೆಲವು ಅಂಗಡಿಗಳಲ್ಲಿ ಪ್ಲಾಸ್ಟಿಕ್ ಬ್ಯಾಗ್ ಬಳಸುತ್ತಿರುವ ಬಗ್ಗೆ ನಿಯಮಾನುಸಾರ ಅಂಗಡಿಗಳ ಮೇಲೆ ದಾಳಿ ನಡೆಸಿ ದಂಡ ವಿಧಿಸುವಂತೆ ಆರೋಗ್ಯ ಪರಿವೀಕ್ಷಕರಿಗೆ ಸೂಚಿಸಲಾಯಿತು.

(V) ಗಾಯತ್ರಿ ತಪೋವನ ಬಡಾವಣೆಯಲ್ಲಿ ತೆರೆದ ಚರಂಡಿಯಲ್ಲಿ ಘನತ್ಯಾಜ್ಯವಿದ್ದು ತೆರವುಗೊಳಿಸಲು ಕೋರಿದ್ದು ಕೂಡಲೆ ಅಗತ್ಯ ಕ್ರಮ ವಹಿಸಲು ಕಿರಿಯ ಆರೋಗ್ಯ ಪರಿವೀಕ್ಷಕರಿಗೆ ಸೂಚಿಸಲಾಯಿತು.

**3. ವಾರ್ಡ್ ವ್ಯಾಪ್ತಿಯಲ್ಲಿ ವಿದ್ಯುತ್ ಸರಬರಾಜು ಸಂಬಂಧಿಸಿದ ವಿಷಯಗಳ ಬಗ್ಗೆ.**

(I) ರಾಯಲ್ ಕೌಂಟಿ ಬಡಾವಣೆಯ ಹತ್ತಿರ ಪಂಚವತಿ ಅಪಾರ್ಟ್ಮೆಂಟ್ ಬಳಿ ಟ್ರಾನ್ಸ್‌ಫಾರ್ಮರ್ ದುರಸ್ಥಿಯಿದ್ದು ಸ್ಥಳ ಪರಿಶೀಲಿಸಿ ಅಗತ್ಯ ಕ್ರಮ ವಹಿಸಲು ಸಹಾಯಕ ಕಾರ್ಯಪಾಲಕ ಅಭಿಯಂತರರು (ಬೆಸ್ಕಾಂ) ರವರಿಗೆ ಸೂಚಿಸಲಾಯಿತು.

(II) ಜೆ.ಪಿ. ನಗರ 9ನೇ ಹಂತ 7ನೇ ಕ್ರಾಸ್ ನಲ್ಲಿ ಟಿ.ಸಿ. ನಂ 653 ಅನ್ನು ಬದಲಾಯಿಸುವಂತೆ ಕೋರಿದ್ದು ಸ್ಥಳ ಪರಿಶೀಲಿಸಿ ಅಗತ್ಯ ಕ್ರಮ ವಹಿಸಲು ಸಹಾಯಕ ಕಾರ್ಯಪಾಲಕ ಅಭಿಯಂತರರು (ಬೆಸ್ಕಾಂ) ರವರಿಗೆ ಸೂಚಿಸಲಾಯಿತು.

(III) ಗೊಟ್ಟಿಗೆರೆ ಕೆರೆಯ ಕಟ್ಟೆಯ ಸುತ್ತ ಹೊಸ ದೀಪಗಳು ಹಾಗೂ ಕೇಬಲಿಂಗ್ ವ್ಯವಸ್ಥೆಗಾಗಿ ಕೋರಿದ್ದು ನಿಯಮಾನುಸಾರ ಅಗತ್ಯ ಕ್ರಮ ವಹಿಸಲು ಸಹಾಯಕ ಕಾರ್ಯಪಾಲಕ ಅಭಿಯಂತರರು (ಬೆಸ್ಕಾಂ) ರವರಿಗೆ ಸೂಚಿಸಲಾಯಿತು.

**4. ಬಿ.ಡಬ್ಲ್ಯೂ.ಎಸ್.ಎಸ್.ಬಿ ಗೆ ಸಂಬಂಧಿಸಿದ ವಿಷಯಗಳ ಬಗ್ಗೆ.**

(I) ಸೌತ್ ಅವೆನ್ಯು ಬಡಾವಣೆಯ ಮಿಸ್ಸಿಂಗ್ ಲಿಂಕ್ಸ್ ಕಾರ್ಯವನ್ನು ಕೈಗೊಳ್ಳುವ ಬಗ್ಗೆ ಸಹಾಯಕ ಕಾರ್ಯಪಾಲಕ ಅಭಿಯಂತರರು (ಬಿ.ಡಬ್ಲ್ಯೂ.ಎಸ್.ಎಸ್.ಬಿ) ರವರಿಗೆ ವಾರ್ಡ್ ಅಭಿಯಂತರರು ಹಾಗೂ ಕಂದಾಯ ನಿರೀಕ್ಷಕರು ಸ್ಥಳ ಪರಿಶೀಲಿಸಿ ಅಗತ್ಯ ಕ್ರಮವಹಿಸಲು ಸೂಚಿಸಲಾಯಿತು.

(II) ಹಿಮಗಿರಿ ಮೆಡೋಸ್ ಬಡಾವಣೆಯಲ್ಲಿರುವ ಕೆಲವು ಚೆಂಬರ್ ಗಳಲ್ಲಿ ನೀರು ಉಕ್ಕಿ ಹರಿಯುತ್ತಿದ್ದು ಕೂಡಲೇ ಅಗತ್ಯ ಕ್ರಮ ವಹಿಸಲು ಸಹಾಯಕ ಕಾರ್ಯಪಾಲಕ ಅಭಿಯಂತರರು (ಬಿ.ಡಬ್ಲ್ಯೂ.ಎಸ್.ಎಸ್.ಬಿ) ರವರಿಗೆ ಸೂಚಿಸಲಾಯಿತು.

(III) ಬನ್ನೇರಘಟ್ಟ ಮುಖ್ಯ ರಸ್ತೆಯಲ್ಲಿರುವ ಪೂರ್ವ ಪನೋರಮದ ಹತ್ತಿರ ಮ್ಯಾನ್‌ಹೋಲ್ ಮುಚ್ಚಳವು ರಸ್ತೆಗಿಂತ ಎತ್ತರವಿದ್ದು ಅಪಘಾತಗಳು ಉಂಟಾಗುವ ಸಂಭವವಿದ್ದು ಕೂಡಲೇ ಸ್ಥಳ ಪರಿಶೀಲಿಸಿ ಅಗತ್ಯ ಕ್ರಮ ವಹಿಸಲು ಸಹಾಯಕ ಕಾರ್ಯಪಾಲಕ ಅಭಿಯಂತರರು (ಬಿ.ಡಬ್ಲ್ಯೂ.ಎಸ್.ಎಸ್.ಬಿ) ರವರಿಗೆ ಸೂಚಿಸಲಾಯಿತು.

(IV) ಗೊಟ್ಟಿಗೆರೆ – ಜಂಬುಸವಾರಿ ರಸ್ತೆಯನ್ನು ದುರಸ್ಥಿಗೊಳಿಸಲು ಕೋರಿರುವ ಬಗ್ಗೆ ವಾರ್ಡ್ ಅಭಿಯಂತರರು ಸ್ಥಳ ಪರಿಶೀಲಿಸಿ ಅಗತ್ಯ ಕ್ರಮ ವಹಿಸಲು ಸೂಚಿಸಲಾಯಿತು.

**5.** ಕೆಂಬತಹಳ್ಳಿ ಕೆರೆಯ ಜಾಗದಲ್ಲಿ ಅತಿಕ್ರಮಣದಿಂದಾಗಿ ಒತ್ತುವರಿಯಾಗುತ್ತಿರುವ ಬಗ್ಗೆ ವಾರ್ಡ್ ಅಭಿಯಂತರರು ಈಗಾಗಲೇ ನೋಟಿಸ್ ಜಾರಿಗೊಳಿಸಿರುವುದಾಗಿ ತಿಳಿಸಿದರು, ನಿಯಮಾನುಸಾರ ಮುಂದಿನ ಅಗತ್ಯ ಕ್ರಮ ವಹಿಸಲು ಸೂಚಿಸಲಾಯಿತು.

Scanned by CamScanner

6. ಗುಂಡಪ್ಪ ಬಡಾವಣೆ, ಶಾಮಣ್ಣ ಬಡಾವಣೆ ಹಾಗೂ ನೈದಿಲೆ ಅಪಾರ್ಟ್ಮೆಂಟ್ ರಸ್ತೆಯಲ್ಲಿರುವ ಮನೆಗಳಿಗೆ ಕಾವೇರಿ ನೀರಿನ ಸಂಪರ್ಕ ಒದಗಿಸಲು ಕೋರಿದ್ದು, ಸಹಾಯಕ ಕಾರ್ಯಪಾಲಕ ಅಭಿಯಂತರರು ಅಗತ್ಯ ಕ್ರಮ ವಹಿಸಲು ಸೂಚಿಸಲಾಯಿತು.

7. ಆರ್ಯಹಂಸ – ಆರ್.ವಿ ಕಾಲೇಜ್ ರಸ್ತೆ ಹಾಗೂ ಜಂಬೂಸವಾರಿ ದಿನ್ನೆ – ಗೊಟ್ಟಿಗೆರೆ ರಸ್ತೆಯ ಪಾದಾಚಾರಿ ಮಾರ್ಗದಲ್ಲಿ ಬೀದಿ ವ್ಯಾಪಾರಿಗಳಿಂದ ಸಂಚಾರಕ್ಕೆ ತೊಂದರೆಯಾಗುತ್ತಿದ್ದು ಈ ಬಗ್ಗೆ ಸಂಚಾರ ಪರಿವೀಕ್ಷಕರು ಅಗತ್ಯ ಕ್ರಮ ವಹಿಸಲು ಸೂಚಿಸಲಾಯಿತು.

ಈ ಮೇಲೆ ತಿಳಿಸಿರುವ ಎಲ್ಲಾ ವಿಷಯ / ಸಮಸ್ಯೆಗಳ ಬಗ್ಗೆ ನಿಯಮಾನುಸಾರ ಅಗತ್ಯ ಕ್ರಮವಹಿಸಲು ಹಾಗೂ ಮುಂದಿನ ಸಭೆಗೆ ಅನುಪಾಲನಾವರದಿಯೊಂದಿಗೆ ಸಂಬಂಧಪಟ್ಟ ಅಧಿಕಾರಿಗಳು ಹಾಜರಾಗಲು ಸೂಚಿಸುತ್ತಾ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಕಾರ್ಯದರ್ಶಿಗಳು
ಹಾಗೂ ಹಿರಿಯ ಆರೋಗ್ಯ ಪರಿವೀಕ್ಷಕರು
ವಾರ್ಡ್ ಸಂಖ್ಯೆ: ೧೯೪, ಗೊಟ್ಟಿಗೆರೆ.

ಪ್ರತಿಯನ್ನು:-

1. ಮಾನ್ಯ ಆಯುಕ್ತರು ರವರ ಅವಗಾಹನೆಗೆ ಸಲ್ಲಿಸಲು ಆಪ್ತ ಕಾರ್ಯಾಲಯಕ್ಕೆ ಸಲ್ಲಿಸಿದೆ.
2. ಜಂಟಿ ಆಯುಕ್ತರು (ಬೊಮ್ಮನಹಳ್ಳಿ) ರವರ ಅವಗಾಹನೆಗೆ ಸಲ್ಲಿಸಿದೆ.
3. ಉಪ ಆಯುಕ್ತರು (ಆಡಳಿತ) ರವರ ಅವಗಾಹನೆಗೆ ಸಲ್ಲಿಸಿದೆ.
4. ಮುಖ್ಯ ಅಭಿಯಂತರರು (ಬೊಮ್ಮನಹಳ್ಳಿ) ರವರ ಅವಗಾಹನೆಗೆ ಸಲ್ಲಿಸಿದೆ.
5. ಅಧೀಕ್ಷಕ ಅಭಿಯಂತರರು (ಬೊಮ್ಮನಹಳ್ಳಿ) ರವರ ಅವಗಾಹನಗೆ ಸಲ್ಲಿಸಿದೆ.
6. ಕಾರ್ಯಪಾಲಕ ಅಭಿಯಂತರರು, ಬಿಬಿಎಂಪಿ, ಗೊಟ್ಟಿಗೆರೆ ರವರಿಗೆ ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
7. ಸಹಾಯಕ ಕಾರ್ಯಪಾಲಕ ಅಭಿಯಂತರರು, (ಬಿ.ಡಬ್ಲ್ಯೂ.ಎಸ್.ಎಸ್.ಬಿ),ಗೊಟ್ಟಿಗೆರೆ ರವರಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ ಕಳುಹಿಸದೆ.
8. ಸಹಾಯಕ ನಿರ್ದೇಶಕರು (ಪಶುಪಾಲನೆ), ಗೊಟ್ಟಿಗೆರೆರವರಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ ಕಳುಹಿಸದೆ.
9. ಕಾರ್ಯಪಾಲಕ ಅಭಿಯಂತರರು, ವಿದ್ಯುತ್ (ಬೊಮ್ಮನಹಳ್ಳಿ) ವಲಯ ಬಿಬಿಎಂಪಿ.
10. ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ.
11. ಕಾರ್ಯಪಾಲಕ ಅಭಿಯಂತರರು, ರಸ್ತೆ ಮತ್ತು ಮೂಲಭೂತ ಸೌಕರ್ಯಗಳು, ಬಿಬಿಎಂಪಿ
12. ಕಾರ್ಯಪಾಲಕ ಅಭಿಯಂತರರು, ಕೆರೆಗಳ ವಿಭಾಗ ಬಿಬಿಎಂಪಿ.
13. ಕಾರ್ಯಪಾಲಕ ಅಭಿಯಂತರರು, ಬೃಹತ್ ನೀರುಗಾಲುವೆ ವಿಭಾಗ ಬಿಬಿಎಂಪಿ.
14. ತೋಟಗಾರಿಕೆ ಅಧೀಕ್ಷಕರು, ಬೊಮ್ಮನಹಳ್ಳಿ ವಲಯ.
15. ಆರೋಗ್ಯ ವೈದ್ಯಾಧಿಕಾರಿಗಳು, ಬೊಮ್ಮನಹಳ್ಳಿ ವಲಯ.
16. ಆರೋಗ್ಯ ವೈದ್ಯಾಧಿಕಾರಿಗಳು, ಪ್ರಾಥಮಿಕ ಆರೋಗ್ಯ ಕೇಂದ್ರ.
17. ಸಹಾಯಕ ಕಾರ್ಯಪಾಲಕ ಅಭಿಯಂತರರು ಘನತ್ಯಾಜ್ಯ ನಿರ್ವಹಣಾ ವಿಭಾಗ.
18. ಸಹಾಯಕ ಕಂದಾಯ ಅಧಿಕಾರಿ ಅಂಜನಾಪುರ ವಿಭಾಗ.
19. ಕಲ್ಯಾಣಾಧಿಕಾರಿಗಳು ಬೊಮ್ಮನಹಳ್ಳಿ ವಲಯ.
20. ಉಪವಲಯ ಅರಣ್ಯ ಸಂರಕ್ಷಣಾಧಿಕಾರಿಗಳು, ಬೊಮ್ಮನಹಳ್ಳಿ ವಲಯ.
21. ಪೋಲೀಸ್ ಇನ್ಸ್ಪೆಕ್ಟರ್, ಹುಳಿಮಾವು ಮತ್ತು ಕೋಣನಕುಂಟೆ ಪೋಲೀಸ್ ಠಾಣೆ.
22. ಕಂದಾಯ ಅಧಿಕಾರಿಗಳು, ಅಂಜನಾಪುರ ಉಪ ವಲಯ.
23. ಸ್ಥಳೀಯ ನಾಗರಿಕಕಲ್ಯಾಣ ಸಂಸ್ಥೆಗಳು.

Scanned by CamScanner